ಚುಕ್ಕೆ ಗುರುತಿನ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು

ಶ್ರೀ ಎಂ. ವೀರಪ್ಪ ಮೊಯಿಲಿ:– ಮಾನ್ಯ ಅಧ್ಯಕ್ಷರೇ, ದಿನಾಂಕ:13-7-90ರ ಲಿಖಿತ ಮೂಲಕ ಉತ್ತರಿಸಬೇಕಾಗಿರುವ 16 ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

ಹಿಂದುಳಿದ ತಾಲ್ಲೂಕುಗಳಲ್ಲಿ ಕೈಗಾರಿಕೆಗಳ ಸ್ಥಾಪನೆ ಬಗ್ಗೆ.

1707 ಶ್ರೀ ಎಲ್.ಆರ್. ಶಿವರಾಮೇಗೌಡ (ನಾಗಮಂಗಲ):- ಮಾನ್ಯ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೇ?

ಅ) ರಾಜ್ಯದಲ್ಲಿ ಹಿಂದುಳಿದ ತಾಲ್ಲೂಕುಗಳಲ್ಲಿ ಸರ್ಕಾರದ ವತಿಯಿಂದ ಏನಾದರೂ ಕೈಗಾರಿಕೆ ಸ್ಥಾಪಿಸುವ ಉದ್ದೇಶ ಸರ್ಕಾರಕ್ಕೆ ಇದೆಯೇ?

ಆ) ರಾಜ್ಯದಲ್ಲಿ ಹಿಂದುಳಿದಿರುವ ತಾಲ್ಲೂಕುಗಳು ಯಾವುವು?

ಇ) ಜಿಲ್ಲೆ ಅಥವಾ ತಾಲ್ಲೂಕುಗಳನ್ನು ಕೈಗಾರಿಕೆಯಲ್ಲಿ ಹಿಂದುಳಿದವು ಎಂದು ಘೋಷಿಸಲು ತಾವು ಯಾವ ಮಾನದಂಡದಿಂದ ತೀರ್ಮಾನ ಕೈಗೊಳ್ಳುವಿರೀ?

ಈ) ನಾಗಮಂಗಲ ತಾಲ್ಲೂಕು ಕೈಗಾರಿಕೆಯಲ್ಲಿ ಹಿಂದುಳಿದ ಪ್ರದೇಶವೆಂದು ಗೊತ್ತು ಪಡಿಸಲಾಗಿದೆಯೇ?

ಉ) ನಾಗಮಂಗಲ ತಾಲ್ಲೂಕಿನಲ್ಲಿ ಯಾವುದಾದರೂ ಒಂದು ಬೃಹತ್ ಕೈಗಾರಿಕೆ ಸ್ಥಾಪನೆ ಮಾಡುವ ಉದ್ದೇಶ ಸರ್ಕಾರಕ್ಕಿದೆಯೇ?

ಶ್ರೀ ಎಸ್.ಎಂ. ಯಾಹ್ಯ (ಕೈಗಾರಿಕಾ ಸಚಿವರು.):-

ಅ) ಸರ್ಕಾರದ ವತಿಯಿಂದ ಹಿಂದುಳಿದ ತಾಲ್ಲೂಕುಗಳಲ್ಲಿ ಕೈಗಾರಿಕೆ ಸ್ಥಾಪಿಸುವ ಉದ್ದೇಶ ಇರುವುದಿಲ್ಲ.

ಆ) ರಾಜ್ಯದಲ್ಲಿ ಹಿಂದುಳಿದ ತಾಲ್ಲೂಕುಗಳೆಂದು 31 ತಾಲ್ಲೂಕುಗಳನ್ನು ವಲಯ -2 ರಲ್ಲೂ 131 ತಾಲ್ಲೂಕುಗಳನ್ನು ವಲಯ -3 ರಲ್ಲೂ ವರ್ಗೀಕರಿಸಲಾಗಿದೆ.

ವಿವರಗಳನ್ನು ಅನುಬಂಧದಲ್ಲಿ ಕೊಡಲಾಗಿದೆ.

ಇ) ಯಾವ ತಾಲ್ಲೂಕಿನಲ್ಲಿ ಕೈಗಾರಿಕಾ ಘಟಕ ಅಥವಾ ಕಡಿಮೆ ಕೈಗಾರಿಕೆ ಘಟಕಗಳು ಇದ್ದಲ್ಲಿ ಅಂತಹ ತಾಲ್ಲೂಕುಗಳನ್ನು ಹಿಂದುಳಿದ ತಾಲ್ಲೂಕುಗಳೆಂದು ಪರಿಗಣಿಸಲಾಗಿದೆ.

ಈ) ಹೌದು. ವಲಯ -3 ರಲ್ಲಿ ವರ್ಗೀಕರಿಸಲಾಗಿದೆ.

ಉ) ಇಲ್ಲ.

ANNEXURE - I

District	Zone-II	Zone-III
1	2	3
Bangalore (Urban & Rural)	1.Magadi 2. Kanakpura 3. Anekal 4. Channapatna	